# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 619(887) |
| ಮಾನ್ಯ ಸದಸ್ಯರ ಹೆಸರು | : | ಶ್ರೀ ಚನ್ನರಾಜ್ ಬಸವರಾಜ್ ಹಟ್ಟಿ ಹೊಳಿ<br>( ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವ ಸಚಿವರು | : | ಮಾನ್ಯ ಉನ್ನತ ಶಿಕ್ಷಣ ಸಚಿವರು |
| ಉತ್ತರಿಸಬೇಕಾದ ದಿನಾಂಕ | : | 26.12.2022 |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಬೆಳಗಾವಿ ಗ್ರಾಮೀಣ ಮತಕ್ಷೇತ್ರದ ವ್ಯಾಪ್ತಿಯಲ್ಲಿ ರಾಣಿ ಚನ್ನಮ್ಮ ವಿಶ್ವವಿದ್ಯಾಲಯದ ಸ್ಥಾಪನೆಯು ಯಾವ ಹಂತದಲ್ಲಿದೆ; ಯಾವ ಕಾಲಮಿತಿಯಲ್ಲಿ ಈ ವಿಶ್ವವಿದ್ಯಾಲಯದ ಸ್ಥಾಪನೆ ಪೂರ್ಣಗೊಳ್ಳಲಿದೆ; | ಬೆಳಗಾವಿ ಗ್ರಾಮೀಣ ಮತಕ್ಷೇತ್ರದ ವ್ಯಾಪ್ತಿಯಲ್ಲಿ ರಾಣಿ ಚನ್ನಮ್ಮ ವಿಶ್ವವಿದ್ಯಾಲಯಕ್ಕೆ ಹಿರೇಬಾಗೇವಾಡಿ-ಹಾಲಗಿಮರ್ಡಿ ಗ್ರಾಮದಲ್ಲಿ ಮಂಜೂರಾದ ಜಾಗದಲ್ಲಿ ಕಾಂಪೌಂಡ್ ನಿರ್ಮಾಣ ಕಾಮಗಾರಿಯು ಪ್ರಗತಿಯ ಹಂತದಲ್ಲಿದೆ. ಮೊದಲನೇ ಹಂತದ ಕಟ್ಟಡ ಕಾಮಗಾರಿ ಮತ್ತು ಸಂಪರ್ಕ ರಸ್ತೆಯ ಕಾಮಗಾರಿಯು ಕೂಡ ಪ್ರಗತಿಯಲ್ಲಿದೆ. |
| ಆ) | ಈ ವಿಶ್ವವಿದ್ಯಾಲಯದ ಸ್ಥಾಪನೆಗಾಗಿ ಎಷ್ಟು ಎಕರೆ ಜಮೀನನ್ನು ಮೀಸಲಿರಿಸಲಾಗಿದೆ; ಈ ಪೈಕಿ ಸರ್ಕಾರಿ ಜಮೀನು ಎಷ್ಟು ಹಾಗೂ ರೈತರಿಂದ ಭೂಸ್ವಾಧೀನಪಡಿಸಿಕೊಂಡಿರುವ ಜಮೀನು ಎಷ್ಟು; | ವಿಶ್ವವಿದ್ಯಾಲಯ ಸ್ಥಾಪನೆಗೆ 126 ಎಕರೆ 27 ಗುಂಟೆ ಸರ್ಕಾರಿ ಜಮೀನನ್ನು ಮೀಸಲಿರಿಸಲಾಗಿದೆ. ಸದರಿ ಜಮೀನನ್ನು ಕರ್ನಾಟಕ ಭೂ-ಮಂಜೂರಾತಿ ನಿಯಮಗಳು, 1969ರ ನಿಯಮ 20(1)(ಸಿ)ರನ್ವಯ ಮಾರುಕಟ್ಟೆ ದರ ಮತ್ತು ನಿಯಮಾನುಸಾರ ಇತರೆ ಶುಲ್ಕವನ್ನು ಭರಿಸಿ ಮಂಜೂರಾತಿ ಮಾಡಿಸಿಕೊಳ್ಳಲಾಗಿದೆ. ರೈತರಿಂದ ಜಮೀನನ್ನು ಭೂಸ್ವಾಧೀನ ಪಡಿಸಿಕೊಂಡಿರುವುದಿಲ್ಲ. |
| ಇ) | ರೈತರಿಂದ ಭೂ-ಸ್ವಾಧೀನಪಡಿಸಿಕೊಂಡಿರುವ ಜಮೀನಿಗೆ ಸರ್ಕಾರ ನಿಗಧಿಪಡಿಸಿರುವ ಪರಿಹಾರ ಧನವೆಷ್ಟು; ಇಲ್ಲಿಯವರೆಗೆ ಎಷ್ಟು ಜನ ರೈತರಿಗೆ ಭೂ-ಪರಿಹಾರ ಧನವನ್ನು ನೀಡಲಾಗಿದೆ; (ವಿವರ ನೀಡುವುದು) | ಉದ್ಭವಿಸುವುದಿಲ್ಲ. |
| ಈ) | ರೈತರ ಜಮೀನನ್ನು ರಸ್ತೆ ನಿರ್ಮಾಣಕ್ಕಾಗಿ ಭೂಸ್ವಾಧೀನ ಮಾಡಿಕೊಳ್ಳಲಾಗಿದೆಯೇ; (ವಿವರ ನೀಡುವುದು) | |

| | | |
|---|---|---|
| **ಉ)** | ಪ್ರಸ್ತುತ ಜಮೀನುಗಳಲ್ಲಿನ ರೈತರು ವಿರೋಧ ವ್ಯಕ್ತಪಡಿಸುತ್ತಿದ್ದು, ಈ ಕುರಿತು ಸರ್ಕಾರ ಕೈಗೊಂಡ ಕ್ರಮಗಳೇನು? | ವಿಶ್ವವಿದ್ಯಾಲಯವು ಹಿರೇಬಾಗೇವಾಡಿ-ಹಾಲಗಿಮರ್ಡಿ ಗ್ರಾಮದಲ್ಲಿ ಮಂಜೂರಾದ ಜಾಗದಲ್ಲಿ ಕಟ್ಟಡ ಕಾಮಗಾರಿಗಳನ್ನು ಪ್ರಾರಂಭಿಸಲು ಅಲ್ಲಿಯ ಸ್ಥಳೀಯ ರೈತರಿಂದ ವಿರೋಧ ವ್ಯಕ್ತವಾದ ಹಿನ್ನಲೆಯಲ್ಲಿ ದಿನಾಂಕ: 09.12.2022ರಂದು ಜಿಲ್ಲಾಧಿಕಾರಿಯವರ ಅಧ್ಯಕ್ಷತೆಯಲ್ಲಿ ರೈತರು ಮತ್ತು ವಿಶ್ವವಿದ್ಯಾಲಯದ ಹಿರಿಯ ಅಧಿಕಾರಿಗಳ ಸಮಕ್ಷಮದಲ್ಲಿ ಸಭೆಯನ್ನು ನಡೆಸಲಾಗಿದ್ದು, ಪರಿಹಾರ ಕಂಡುಕೊಳ್ಳಲು ಪ್ರಯತ್ನಿಸಲಾಗುತ್ತಿದೆ. |

**ಸಂಖ್ಯೆ: ಇಡಿ/443 /ಯುಆರ್‌ಸಿ /2022**

**(ಡಾ. ಅಶ್ವಥ್ ನಾರಾಯಣ ಸಿ.ಎನ್)**
ಉನ್ನತ ಶಿಕ್ಷಣ, ಐಟಿ – ಬಿಟಿ ಮತ್ತು ವಿಜ್ಞಾನ
ಮತ್ತು ತಂತ್ರಜ್ಞಾನ, ವಿದ್ಯುನ್ಮಾನ ಮತ್ತು
ಕೌಶಲ್ಯಾಭಿವೃದ್ಧಿ, ಜೀವನೋಪಾಯ ಹಾಗೂ
ಉದ್ಯಮಶೀಲತೆ